ಕರ್ನಾಟಕ ಸರ್ಕಾರ

ಇ-ಕಛೇರಿ ಸಂ: ಇಡಿ 312 ಯುಬಿವಿ 2024

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 04.10.2024

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ,
ಬೆಂಗಳೂರು

ಇವರಿಗೆ
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಜ್ಞಾನಭಾರತಿ
ಬೆಂಗಳೂರು

ಮಾನ್ಯರೇ,

ವಿಷಯ: ಬೆಂಗಳೂರು ವಿಶ್ವವಿದ್ಯಾಲಯದ ಸುರಾನ ಕಾಲೇಜು ಇಲ್ಲಿ ಅಸ್ತಿತ್ವದಲ್ಲಿರುವ 2024-25ನೇ ಶೈಕ್ಷಣಿಕ ಸಾಲಿನಿಂದ ಶಾಶ್ವತ ಸಂಯೋಜನೆ ನೀಡುವ ಕುರಿತು.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ:12.02.2021, ದಿನಾಂಕ: 16.02.2021
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 384 ಯುಎನ್ಇ 2020, ದಿನಾಂಕ: 18.02.2022.
3. ತಮ್ಮ ಪತ್ರ ಸಂಖ್ಯೆ: ಎಸಿಎ-3:ಎ3:ಶಾ:ಸಂ:ಪ್ರು:4:/2024-25/, ದಿನಾಂಕ: 18.07.2024. (UUCMS Code - AFF/215/AF/P202GMF0260/2024-25/10975)

*****

ಬೆಂಗಳೂರು ವಿಶ್ವವಿದ್ಯಾಲಯದ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೆ ಹಾಗೂ ಸಂಯೋಜನೆಗೊಳಪಡುವ ಸುರಾನ ಕಾಲೇಜು, ನಂ. 167, ಇಂಡಸ್ಟ್ರಿಯಲ್ ಸಬರ್ಬ್ಸ್, 5ನೇ ಮುಖ್ಯರಸ್ತೆ, 2ನೇ ಹಂತ, ಪೀಣ್ಯ ಇಲ್ಲಿ ನಡೆಸಲಾಗುತ್ತಿರುವ ಬಿ.ಎ, ಬಿ.ಬಿ.ಎ, ಬಿಕಾಂ, ಬಿ.ಎಸ್ಸಿ, ಹಾಗೂ ಬಿ.ಸಿ.ಎ ಕೋರ್ಸುಗಳಿಗೆ 2024-2025ನೇ ಸಾಲಿನಿಂದ ಹೊಸದಾಗಿ ಶಾಶ್ವತ ಸಂಯೋಜನೆ ನೀಡಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ ಓದಲಾದ ಪ್ರಕರಣ 62(1)ರಡಿ ಅಗತ್ಯವಾಗುವ ಶಿಫಾರಸ್ಸನ್ನು ಕೋರಿ, ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ, ಆನ್‌ಲೈನ್ ತಂತ್ರಾಂಶದಲ್ಲಿ ಅಳವಡಿಸಿರುವ ಪ್ರಪತ್ರಗಳಲ್ಲಿ ಉಲ್ಲೇಖ(2)ರ ಪತ್ರದನ್ವಯ ಸಲ್ಲಿಸಲಾಗಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ ಭೌತಿಕ ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು, ಷರತ್ತುಗಳಿಗೆ ಒಳಪಟ್ಟು ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

..2

ತತ್ಪರಿಣಾಮವಾಗಿ, ಸುರಾನ ಕಾಲೇಜು, ನಂ. 167, ಇಂಡಸ್ಟ್ರಿಯಲ್ ಸಬರ್ಬ್ಸ್, 5ನೇ ಮುಖ್ಯರಸ್ತೆ, 2ನೇ ಹಂತ, ಪೀಣ್ಯ ಇಲ್ಲಿ ನಡೆಸಲಾಗುತ್ತಿರುವ ಬಿ.ಎ, ಬಿ.ಬಿ.ಎ, ಬಿಕಾಂ, ಬಿ.ಎಸ್ಸಿ, ಹಾಗೂ ಬಿ.ಸಿ.ಎ ಕೋರ್ಸುಗಳಿಗೆ ಶಾಶ್ವತ ಸಂಯೋಜನೆಯನ್ನು 2024-2025ನೇ ಶೈಕ್ಷಣಿಕ ಸಾಲಿನಿಂದ ನೀಡಲು ಹಾಗೂ ಹೊಸ ಕಾರ್ಯಕ್ರಮಕ್ಕೆ ಸಂಯೋಜನೆಯನ್ನು ಈ ಕೆಳಂಡಂತೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ಜೊತೆಯಲ್ಲಿ ಓದಲಾದ ಪ್ರಕರಣ 62(1)ರಡಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

**ಅ) ಶಾಶ್ವತ ಸಂಯೋಜನೆ ನವೀಕರಣ**

| ಕ್ರ.ಸಂ | ವ್ಯಾಸಂಗಕ್ರಮ | ವಿಷಯ ಸಮೂಹ | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | Bachelor of Arts | Economics, History, Political Science | 60 |
| | | Economics, History, Journalism | 60 |
| 2 | Bachelor of Business Administration | General | 60 |
| 3 | Bachelor of Commerce | General | 80 |
| 4 | Bachelor of Computer Applications | Computer Applications | 60 |
| 5 | Bachelor of Science | Botany, Chemistry, Environmental Science | 40 |
| 6 | Bachelor of Science | Chemistry, Mathematics, Physics | 40 |

ಸುರಾನ ಕಾಲೇಜು, ನಂ. 167, ಇಂಡಸ್ಟ್ರಿಯಲ್ ಸಬರ್ಬ್ಸ್, 5ನೇ ಮುಖ್ಯರಸ್ತೆ, 2ನೇ ಹಂತ, ಪೀಣ್ಯ ಇಲ್ಲಿ ನಡೆಸಲಾಗುತ್ತಿರುವ ಬಿ.ಎ, ಬಿ.ಬಿ.ಎ, ಬಿಕಾಂ, ಬಿ.ಎಸ್ಸಿ, ಹಾಗೂ ಬಿ.ಸಿ.ಎ ಕೋರ್ಸುಗಳಿಗೆ 2024-2025ನೇ ಶೈಕ್ಷಣಿಕ ಸಾಲಿನಿಂದ ಶಾಶ್ವತ ಸಂಯೋಜನೆಯನ್ನು ಮಂಜೂರು ಮಾಡುವುದು ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

1 ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2 ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

3 ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4 ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5 ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

6 ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

7 ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8 ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

9 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 06 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ

10 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13 ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 62 ರಲ್ಲಿನ ಮಾನದಂಡಗಳು ಹಾಗೂ ಶಾಶ್ವತ ಸಂಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು, ಸಂಬಂಧಿಸಿದ ಕಾಲೇಜು / ಸಂಸ್ಥೆಗಳು ಪಾಲಿಸಿವೆಯೇ ಎಂಬುದರ ಕುರಿತಾಗಿ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಸಂಬಂಧಿಸಿದ ವಿಶ್ವವಿದ್ಯಾಲಯವು ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್‌ಇ 2021, ದಿನಾಂಕ: 12-02-2021 ಮತ್ತು ಇಡಿ 218 ಯುಎನ್‌ಇ 2020 ದಿನಾಂಕ:24.08.2020 ರಲ್ಲಿನ ಷರತ್ತುಗಳನ್ನು 06 ತಿಂಗಳ ಒಳಗಾಗಿ ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ.

ತಮ್ಮ ನಂಬುಗೆಯ,

(ಕೆ. ಮಂಜುನಾಥ) 4/10/24

ಸರ್ಕಾರದ ಅಧೀನ ಕಾರ್ಯದರ್ಶಿ

ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ-2)

ಪ್ರತಿ:

1) ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560 001

2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು

3) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.

4)ಪ್ರಾಂಶುಪಾಲರು, ಸುರಾನ ಕಾಲೇಜು, ನಂ. 167, ಇಂಡಸ್ಟ್ರಿಯಲ್ ಸಬರ್ಬ್ಸ್, 5ನೇ ಮುಖ್ಯರಸ್ತೆ, 2ನೇ ಹಂತ, ಪೀಣ್ಯ ಇಲ್ಲಿ ನಡೆಸಲಾಗುತ್ತಿರುವ ಬಿ.ಎ, ಬಿ.ಬಿ.ಎ, ಬಿಕಾಂ, ಬಿ.ಎಸ್ಸಿ, ಹಾಗೂ ಬಿ.ಸಿ.ಎ ಕೋರ್ಸುಗಳಿಗೆ

5) ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ(ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಬೆಂಗಳೂರು ವಿಶ್ವವಿದ್ಯಾಲಯದ ಸುರಾನ ಕಾಲೇಜು ಇಲ್ಲಿಗೆ 2024-25ನೇ ಶೈಕ್ಷಣಿಕ ಸಾಲಿನ ಬಿ.ಸಿ.ಎ. ಕೋರ್ಸಿಗೆ ಹೆಚ್ಚುವರಿ ವಿದ್ಯಾರ್ಥಿ ಪ್ರಮಾಣವನ್ನು ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ:12.02.2021, ದಿನಾಂಕ: 16.02.2021
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 384 ಯುಎನ್ಇ 2020, ದಿನಾಂಕ: 18.02.2022.
3. ತಮ್ಮ ಪತ್ರ ಸಂಖ್ಯೆ: ಎಸಿಎ-3:ಎ3:ಶಾ:ಸಂ:ಪ್ರ:4:/2024-25/, ದಿನಾಂಕ: 18.07.2024. (UUCMS Code - AFF/215/AF/P202GMF0260/2024-25/10975)

****

**ಪ್ರಸ್ತಾವನೆ:**

2024-25 ನೇ ಸಾಲಿನಿಂದ ಬೆಂಗಳೂರು ವಿಶ್ವವಿದ್ಯಾಲಯದ ಸುರಾನ ಕಾಲೇಜು, ನಂ. 167, ಇಂಡಸ್ಟ್ರಿಯಲ್ ಸಬರ್ಬ್ಸ್, 5ನೇ ಮುಖ್ಯರಸ್ತೆ, 2ನೇ ಹಂತ, ಪೀಣ್ಯ ಇಲ್ಲಿ ಅಸ್ತಿತ್ವದಲ್ಲಿರುವ ಬಿ.ಸಿ.ಎ. ಕೋರ್ಸಿಗೆ ವಿದ್ಯಾರ್ಥಿ ಪ್ರಮಾಣ ಹೆಚ್ಚಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(18) ರಡಿ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ UUCMS ಆನ್‌ಲೈನ್ ತಂತ್ರಾಂಶದಲ್ಲಿ ಅಳವಡಿಸಿರುವ ಪ್ರಪತ್ರಗಳಲ್ಲಿ ಮೇಲೆ ಕ್ರಮ ಸಂಖ್ಯೆ(3)ರಲ್ಲಿ ಓದಲಾದ ಪತ್ರದನ್ವಯ ಸಲ್ಲಿಸಲಾಗಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲಭೂತ ಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಆದೇಶ ಹಾಗೂ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಸುತ್ತೋಲೆಯಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000, ಪ್ರಕರಣ 59(18) ರ ಎರಡನೇ ಪರಂತುಕದಲ್ಲಿ ಉಪಬಂಧಿಸಿರುವಂತೆ ಸ್ನಾತಕೋತ್ತರ ಶಿಕ್ಷಣ ಕಾರ್ಯಕ್ರಮಗಳೂ ಸೇರಿದಂತೆ ಇಂಜಿನಿಯರಿಂಗ್, ವಾಸ್ತುಶಿಲ್ಪ ಮತ್ತು ವ್ಯವಸ್ಥಾಪನೆ ಮುಂತಾದ ವೃತ್ತಿಪರ ವ್ಯಾಸಂಗ ಕ್ರಮಗಳ ಸಂದರ್ಭದಲ್ಲಿ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆಯನ್ನು ರಾಜ್ಯ ಸರ್ಕಾರವು ನಿರ್ಧರಿಸಬೇಕಾಗುತ್ತದೆ.

ಅದರಂತೆ, ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ, ಸುರಾನ ಕಾಲೇಜು, ನಂ. 167, ಇಂಡಸ್ಟ್ರಿಯಲ್ ಸಬರ್ಬ್ಸ್, 5ನೇ ಮುಖ್ಯರಸ್ತೆ, 2ನೇ ಹಂತ, ಪೀಣ್ಯ ಇಲ್ಲಿ ಬಿ.ಸಿ.ಎ. ಕೋರ್ಸಿಗೆ ವಿದ್ಯಾರ್ಥಿ ಪ್ರಮಾಣ ಹೆಚ್ಚಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000, ಪ್ರಕರಣ 59(18)ರಲ್ಲಿನ ಅವಕಾಶಗಳನ್ವಯ ಪರಿಗಣಿಸಿ ಈ ಕೆಳಕಂಡಂತೆ ಆದೇಶ,

**ಸರ್ಕಾರದ ಆದೇಶ ಸಂಖ್ಯೆ: ಇಡಿ 312 ಯುಬಿವಿ 2024, ಬೆಂಗಳೂರು, ದಿನಾಂಕ:03.10.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, 2024-25 ನೇ ಶೈಕ್ಷಣಿಕ ಸಾಲಿನಿಂದ ಸುರಾನ ಕಾಲೇಜು, ನಂ. 167, ಇಂಡಸ್ಟ್ರಿಯಲ್ ಸಬರ್ಬ್ಸ್, 5ನೇ ಮುಖ್ಯರಸ್ತೆ, 2ನೇ ಹಂತ, ಪೀಣ್ಯ ಇಲ್ಲಿನ ಬಿ.ಸಿ.ಎ. ಕೋರ್ಸಿಗೆ ವಿದ್ಯಾರ್ಥಿ ಪ್ರಮಾಣ ಮಿತಿ ಹೆಚ್ಚಳ ಮಾಡಲು ಕರ್ನಾಟಕ ರಾಜ್ಯ

ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(18)ರ ಪರಂತುಕದಡಿ ಪ್ರದತ್ತವಾದ ಅಧಿಕಾರದನ್ವಯ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳನ್ನು ನಿಗದಿಪಡಿಸಿ ಆದೇಶಿಸಿದೆ.

**ವಿದ್ಯಾರ್ಥಿ ಪ್ರಮಾಣ ಹೆಚ್ಚಳ**

| ಕೋರ್ಸು | ವಿಷಯ | ಪ್ರಸ್ತುತ ಇರುವ ವಿದ್ಯಾರ್ಥಿ ಪ್ರಮಾಣ | ಹೆಚ್ಚುವರಿಯಾಗಿ ಕೋರಿರುವ ವಿದ್ಯಾರ್ಥಿ ಪ್ರಮಾಣ | ಒಟ್ಟು |
|---|---|---|---|---|
| ಬಿ.ಸಿ.ಎ | ವಿ.ವಿ. ಪರಿನಿಯಮಾವಳಿಯಂತೆ | 60 | 60 | 120 |

**ಷರತ್ತು ಮತ್ತು ನಿಬಂಧನೆಗಳು : -**

1) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 59 ರಲ್ಲಿನ ಮಾನದಂಡಗಳು ಹಾಗೂ ಸಂಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು ಸಂಬಂಧಿಸಿದ ಕಾಲೇಜು ಪಾಲಿಸಿವೆಯೇ ಎಂಬುದರ ಕುರಿತಾಗಿ ಸಂಬಂಧಿಸಿದ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ವಿಶ್ವವಿದ್ಯಾಲಯವು ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ: 12.02.2021 ಹಾಗೂ ಇಡಿ 218 ಯುಎನ್ಇ 2020 ರಲ್ಲಿನ ಷರತ್ತುಗಳನ್ನು (06) ತಿಂಗಳೊಳಗೆ ಅನುಮೋದನೆ ಪಡೆಯುವ ಷರತ್ತಿಗೊಳಟ್ಟಿದೆ.

2) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

3) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು; ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4) ಪ್ರತಿವಿದ್ಯಾರ್ಥಿಗೆ ಲಭ್ಯವಾಗುವ ತಲಾವಾರು ಪ್ರಯೋಗಾಲಯ ಪ್ರದೇಶ (ಚದುರ ಅಡಿ/ವಿದ್ಯಾರ್ಥಿ) ಹಾಗೂ ಪ್ರತಿ ವಿದ್ಯಾರ್ಥಿಗೆ ಲಭ್ಯವಾಗುವ ತಲಾವಾರು ಗ್ರಂಥಾಲಯ ಪ್ರದೇಶ (ಚದುರ ಅಡಿ/ವಿದ್ಯಾರ್ಥಿ) ಸರಿಪಡಿಸಿಕೊಳ್ಳತಕ್ಕದ್ದು.

5) ಸ್ಥಳೀಯ ವಿಚಾರಣೆ ಸಮಿತಿಯು ಹಾಗೂ ಪತ್ರದಲ್ಲಿನ ಷರತ್ತುಗಳನ್ನು ಕಾಲೇಜು ಪರಿಪಾಲಿಸುವುದನ್ನು ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು, ತಪ್ಪಿದಲ್ಲಿ, 2024-25ನೇ ಸಾಲಿನಿಂದ ಸಂಯೋಜನೆಯನ್ನು ರದ್ದುಪಡಿಸಲು ಕರ್ನಾಟಕ ವಿಶ್ವವಿದ್ಯಾಲಯ್ಕಕೆ ಸೂಚಿಸಲಾಗಿದೆ.

6) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

7) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

8) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

9) ದಿನಾಂಕ:13-8-1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

10) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

11) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 06 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

12) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

13) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

14) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ. ಮಂಜುನಾಥ 4/10/24

(ಕೆ.ಮಂಜುನಾಥ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

04/10

**ಇವರಿಗೆ:-**

1) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2) ಕುಲಪತಿಗಳು/ಕುಲಸಚಿವರು/ಹಣಕಾಸು ಅಧಿಕಾರಿಗಳು, ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ ಆವರಣ, ಬೆಂಗಳೂರು.
3) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
5) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
6) ಪ್ರಾಂಶುಪಾಲರು, ಸುರಾನ ಕಾಲೇಜು, ನಂ. 167, ಇಂಡಸ್ಟ್ರಿಯಲ್ ಸಬರ್ಬ್, 5ನೇ ಮುಖ್ಯರಸ್ತೆ, 2ನೇ ಹಂತ, ಪೀಣ್ಯ, ಬೆಂಗಳೂರು
7) ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ (ಜಾಲತಾಣದಲ್ಲಿ ಪ್ರಚುರಪಡಿಸುವುದು).
8) ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.